(71)

## ವಿಧಾನ ಪರಿಷತ್ತಿನ ಸದಸ್ಯರಾದ ಡಾ.ವೈ.ಎ.ನಾರಾಯಣಸ್ವಾಮಿ ರವರ ನಿಯಮ 72ರ ಅಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ

**ವಿಷಯ:**

ಕರ್ನಾಟಕ ರಾಜ್ಯದಲ್ಲಿನ ಸರ್ಕಾರಿ ಮತ್ತು ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಮಧ್ಯಾಹ್ನದ ಬಿಸಿಯೂಟ ಯೋಜನೆ ಜಾರಿಯಾದಾಗಿನಿಂದ ಬಡ ಮತ್ತು ಮಧ್ಯಮ ವರ್ಗದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಪೂರಕವಾಗಿರುವುದು ಸರಿಯಷ್ಟೆ. ಮಧ್ಯಾಹ್ನದ ಬಿಸಿಯೂಟ ಯೋಜನೆ ಸರ್ಕಾರಿ ಮತ್ತು ಅನುದಾನಿತ, ಸಂಯುಕ್ತ ಪದವಿಪೂರ್ವ ಕಾಲೇಜುಗಳ ವಿದ್ಯಾರ್ಥಿಗಳಿಗೂ ವಿಸ್ತರಿಸಿದರೆ ಗ್ರಾಮೀಣ ಭಾಗಗಳಿಂದ ನಗರಕ್ಕೆ ವಿದ್ಯಾಭ್ಯಾಸಕ್ಕಾಗಿ ಬರುವ ವಿದ್ಯಾರ್ಥಿಗಳಿಗೆ ಸಾಕಷ್ಟು ಅನುಕೂಲವಾಗಲಿದೆ ಎಂಬ ವಿಷಯದ ಬಗ್ಗೆ ಚರ್ಚಿಸಲು ಮಾನ್ಯ ಪ್ರಾಥಮಿಕ ಪ್ರೌಢಶಿಕ್ಷಣ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಉತ್ತರ:**

ಮಧ್ಯಾಹ್ನ ಉಪಹಾರ ಯೋಜನೆಯು ಕೇಂದ್ರ ಪುರಸ್ಕತ ಯೋಜನೆಯಾಗಿದ್ದು, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಮಹಾತ್ವಾಕಾಂಕ್ಷೆಯ ಯೋಜನೆಯಾಗಿರುತ್ತದೆ. ಸದರಿ ಯೋಜನೆಯನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಅನುಷ್ಠಾನ ಮಾಡಲಾಗುತ್ತಿದ್ದು, ಈ ಯೋಜನೆಯಡಿ ಪ್ರಸ್ತುತ ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ 1 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಬಿಸಿಯೂಟವನ್ನು ಒದಗಿಸಲಾಗುತ್ತಿದೆ. 1 ರಿಂದ 8ನೇ ತರಗತಿಗಳಿಗೆ ಸಂಬಂಧಿಸಿದ ಮಧ್ಯಾಹ್ನ ಉಪಹಾರ ಯೋಜನೆಯ ವೆಚ್ಚವನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ 60:40 ಅನುಪಾತದಂತೆ ಭರಿಸಲಾಗುತ್ತಿದ್ದು, 9 ಮತ್ತು 10ನೇ ತರಗತಿಗಳಿಗೆ ಸಂಬಂಧಿಸಿದ ಮಧ್ಯಾಹ್ನ ಉಪಹಾರ ಯೋಜನೆ ಮತ್ತು 1 ರಿಂದ 10ನೇ ತರಗತಿಗಳಿಗೆ ಸಂಬಂಧಿಸಿದ ಕ್ಷೀರಭಾಗ್ಯ ಯೋಜನೆಯ ವೆಚ್ಚಗಳನ್ನು ಸಂಪೂರ್ಣವಾಗಿ ರಾಜ್ಯ ಸರ್ಕಾರದಿಂದ ಭರಿಸಲಾಗುತ್ತಿದೆ.

ಮಧ್ಯಾಹ್ನ ಉಪಹಾರ ಯೋಜನೆಯನ್ನು ಸರ್ಕಾರಿ ಮತ್ತು ಅನುದಾನಿತ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿಸ್ತರಿಸುವ ಯಾವುದೇ ಪ್ರಸ್ತಾವನೆ ಪ್ರಸ್ತುತ ಸರ್ಕಾರದ ಮುಂದೆ ಇರುವುದಿಲ್ಲ,

**ಇಪಿ 19 ಎಂಎಂಎಸ್ 2024**

**(ಎಸ್.ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.**